ಪ್ರಜಾ ಭಾರತ

ಕನ್ನಡ ದಿನಪತ್ರಿಕೆ ಸತ್ಯದ ಪರ - ಪ್ರಜೆಗಳ ಧ್ವನಿ..!



ರೈತರಿಗೆ ಯಾವ ನೋಟಿಸ್ ನೀಡುವಂತಿಲ್ಲ: ಅರಣ್ಯ ಇಲಾಖೆಗೆ ಸಿಎಂ ಖಡಕ್ ಸೂಚನೆ

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-63 HASSAN Date : 04.11.2026 WEDNESDAY Reg No.PRGI No. KNKAN/26/A6168 Page-02 Rs.1.00

ಸಂಪುಟ–01 ಸಂಚಿಕೆ–63 ಹಾಸನ ದಿನಾಂಕ: 04.11.2026 ಬುಧವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ರೈಲ್ವೆ ಗೇಟ್ ಮುರಿದ ದೈತ್ಯ ಕಾಡಾನೆ



ಪ್ರಜಾ ಭಾರತ ವರದಿ

ಸಕಲೇಶಪುರ: ತಾಲೂಕಿನ ಹಸಿಡೆ ಗ್ರಾಮದಲ್ಲಿ ಹಾದುಹೋಗಿರುವ ಸಕಲೇಶಪುರ–ಬೆಂಗಳೂರು ರೈಲ್ವೆ ಮಾರ್ಗದ ಗೇಟ್ ಅನ್ನು ಸೋಮವಾರ ರಾತ್ರಿ ದೈತ್ಯ ಕಾಡಾನೆಯೊಂದು ಮುರಿದು ಹಾಕಿದೆ.

ರೈಲು ಸಂಚಾರಕ್ಕೂ ಮುನ್ನ ಗೇಟ್ ಹಾಕಲಾಗಿ–ತ್ತು. ಈ ವೇಳೆ ಅದೇ ಮಾರ್ಗವಾಗಿ ಬಂದ ಕಾಡಾನೆ ಗೇಟ್ ಅನ್ನು ಮುರಿದು, ರೈಲ್ವೆ ಹಳಿ ದಾಟಿ ಮುಂದೆ ಸಾಗಿದೆಯೆಂದು ತಿಳಿದುಬಂದಿದೆ.

ಆನೆ ಗೇಟ್ ಮುರಿದು ಹಳಿ ದಾಟಿದ ಸಂದರ್ಭದಲ್ಲಿ ರೈಲು ಬಂದಿದ್ದರೆ ಭಾರೀ ಅವಘಡ ಸಂಭವಿಸುವ ಸಾಧ್ಯತೆ ಇತ್ತು. ಅದೃಷ್ಟವಶಾತ್, ಯಾವುದೇ ಅವಘಡ ಸಂಭವಿಸಿರುವ ಬಗ್ಗೆ ಮಾಹಿತಿ ಇಲ್ಲ.

ಘಟನೆ ತಿಳಿದು ಮಂಗಳವಾರ ಬೆಳಗ್ಗೆ ಸ್ಥಳಕ್ಕೆ ಭೇಟಿ ನೀಡಿದ ಸಕಲೇಶಪುರ ವಲಯ ಅರಣ್ಯಾಧಿಕಾರಿ (RFO) ಹೇಮಂತ್ ಕುಮಾರ್ ಪರಿಶೀಲನೆ ನಡೆಸಿದರು.

ಕಳೆದುಹೋದ 3 ಲಕ್ಷ ರೂ. ಮೌಲ್ಯದ ಚಿನ್ನದ ಬಳೆ ವಾರಸುದಾರರಿಗೆ ಹಸ್ತಾಂತರ



ಪ್ರಜಾ ಭಾರತ ವರದಿ

ಹಾಸನ: ಹಾಸನಾಂಬೆ ದೇವಿ ದರ್ಶನಕ್ಕೆ ಬಂದಿದ್ದ ಮಹಿಳೆಯೊಬ್ಬರು ಕಳೆದುಕೊಂಡಿದ್ದ ಸುಮಾರು 3 ಲಕ್ಷ ರೂ. ಮೌಲ್ಯದ 30 ಗ್ರಾಂ ಚಿನ್ನದ ಬಳೆಯನ್ನು ವಾರಸುದಾರರಿಗೆ ಮರಳಿಸುವ ಮೂಲಕ ಕಂದಾಯ ಇಲಾಖೆ ಸಿಬ್ಬಂದಿ ಪ್ರಾಮಾಣಿಕತೆ ಮೆರೆದಿದ್ದಾರೆ.

ರಾಮನಗರದ ರಮ್ಯಾ ಅವರು ಸಹೋದರಿಯೊಂದಿಗೆ ಹಾಸನಾಂಬೆ ದರ್ಶನಕ್ಕೆ ಆಗಮಿಸಿ, 1,000 ರೂ. ವಿಶೇಷ ದರ್ಶನದ ಟಿಕೆಟ್ ಪಡೆದು ಸರತಿ ಸಾಲಿನಲ್ಲಿ ತೆರಳುತ್ತಿದ್ದಾಗ ಕೈಯಲ್ಲಿದ್ದ ಚಿನ್ನದ ಬಳೆ ಆಕಸ್ಮಿಕವಾಗಿ ಕಳಚಿ ಬಿದ್ದಿದೆ. ದರ್ಶನ ಮುಗಿಸಿ ಹೊರಬಂದಾಗ ಬಳೆ ಕಾಣೆಯಾಗಿರುವುದು ಗಮನಕ್ಕೆ ಬಂದಿದೆ.

ಈ ನಡುವೆ ಬಳೆ ಕಂದಾಯ ಇಲಾಖೆ ಸಿಬ್ಬಂದಿಗೆ ದೊರೆತಿದ್ದು, ಅನೌನ್ಸರ್ ಲಕ್ಷ್ಮೀನಾರಾಯಣ ಅವರ ಮೂಲಕ ಮೈಕ್‌ನಲ್ಲಿ ಪ್ರಕಟಣೆ ಮಾಡಿಸಲಾಯಿತು. ಪ್ರಕಟಣೆ ಕೇಳಿದ ರಮ್ಯಾ ಅವರು ಸ್ಥಳಕ್ಕೆ ಆಗಮಿಸಿ ಬಳೆಯ ಗುರುತು ತಿಳಿಸಿ ಆಭರಣವನ್ನು ಮರಳಿ ಪಡೆದುಕೊಂಡಿದ್ದಾರೆ.

ಬೆಲೆಬಾಳುವ ಆಭರಣವನ್ನು ಯಾವುದೇ ಆಸೆ ಆಮಿಷಕ್ಕೆ ಒಳಗಾಗದೆ ವಾರಸುದಾರರಿಗೆ ತಲುಪಿಸಿದ ಸಿಬ್ಬಂದಿಯ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಭಾರಿ ಲಾರಿಗಳ ಭಾರಕ್ಕೆ ಬಲಿಯಾದ ಬೇಲೂರು–ಬಿಕ್ಕೋಡು ರಸ್ತೆ

60ರಿಂದ 70 ಟನ್ ಮಣ್ಣಿನ ಲಾರಿಗಳ ಅಬ್ಬರಕ್ಕೆ ರಸ್ತೆ ಸಂಪೂರ್ಣ ಜರ್ಜರಿತ | ಅಧಿಕಾರಿಗಳ ಮೌನಕ್ಕೆ ಗ್ರಾಮಸ್ಥರ ಆಕ್ರೋಶ



ಪ್ರಜಾ ಭಾರತ ವರದಿ

ಬೇಲೂರು: ಒಂದೆಡೆ ಅಭಿವೃದ್ಧಿಯ ಹೆಸರಿನಲ್ಲಿ ಭಾರಿ ವಾಹನಗಳ ಸಂಚಾರ, ಮತ್ತೊಂದೆಡೆ ಹದಗೆಟ್ಟ ರಸ್ತೆಯಲ್ಲಿ ನಿತ್ಯ ನರಕಯಾತನೆ ಅನುಭವಿಸುತ್ತಿರುವ ಜನಸಾಮಾನ್ಯರು, ಬೇಲೂರು–ಬಿಕ್ಕೋಡು–ಲಕ್ಕುಂದ ಸಂಪರ್ಕ ರಸ್ತೆಯ ಇಂದಿನ ದುಸ್ಥಿತಿಗೆ ಅಧಿಕ ಭಾರ ಹೊತ್ತ ಮಣ್ಣಿನ ಲಾರಿಗಳೇ ಕಾರಣ ಎಂಬ ಆರೋಪ ಕೇಳಿಬಂದಿದ್ದು, ಸಂಬಂಧಪಟ್ಟ ಇಲಾಖೆಗಳ ನಿರ್ಲಕ್ಷ್ಯದ ವಿರುದ್ಧ ಗ್ರಾಮಸ್ಥರು ಬೀದಿಗಿಳಿದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೇಲೂರು ತಾಲ್ಲೂಕಿನ ಬಿಕ್ಕೋಡು ಮತ್ತು ಅರೇಹಳ್ಳಿ ಭಾಗದ ಗ್ರಾಮಗಳಿಗೆ ಪ್ರಮುಖ ಸಂಪರ್ಕ ಕೊಂಡಿಯಾಗಿರುವ ಈ ರಸ್ತೆ ಇದೀಗ ಗುಂಡಿಗಳಿಂದ ತುಂಬಿಹೋಗಿದ್ದು, ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರತಿನಿತ್ಯ 60 ರಿಂದ 70 ಟನ್‌ಗಳಷ್ಟು ಮಣ್ಣು ಸಾಗಿಸುವ 10ರಿಂದ 12 ಚಕ್ರಗಳ ಭಾರಿ ಲಾರಿಗಳ ನಿರಂತರ ಸಂಚಾರದಿಂದ ರಸ್ತೆ ಸಂಪೂರ್ಣ ಜರ್ಜ–ರಿತವಾಗಿದೆ ಎಂದು ಆರೋಪಿಸಿರುವ ಗ್ರಾಮಸ್ಥರು, ಬಿಕ್ಕೋಡಿನ ಮದಘಟ್ಟ ವೃತ್ತದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

● ನಿಯಮ ಗಾಳಿಗೆ ತೂರಿದ ಭಾರಿ ವಾಹನಗಳು

ಈ ಮಾರ್ಗದಲ್ಲಿ 20 ಟನ್‌ಗಿಂತ ಹೆಚ್ಚಿನ ಭಾರ ಹೊತ್ತ ವಾಹನಗಳ ಸಂಚಾರಕ್ಕೆ ಅವಕಾಶವಿಲ್ಲ ಎಂಬ ನಿಯಮವಿದ್ದರೂ, 60ರಿಂದ 70 ಟನ್‌ಗಳಷ್ಟು ಭಾರ ಹೊತ್ತ ಲಾರಿಗಳು ರಾಜಾರೋಷವಾಗಿ ಸಂಚರಿಸುತ್ತಿವೆ

ಬಿಕ್ಕೋಡು ಮದಘಟ್ಟ ವೃತ್ತದಲ್ಲಿ ರಸ್ತೆ ತಡೆದು ಪ್ರತಿಭಟನೆ | ಭಾರಿ ವಾಹನಗಳ ಸಂಚಾರಕ್ಕೆ ಕಡಿವಾಣ, ಶಾಶ್ವತ ರಸ್ತೆ ಅಭಿವೃದ್ಧಿಗೆ ಆಗ್ರಹ

ಎಂಬುದು ಪ್ರತಿಭಟನಾಕಾರರ ಗಂಭೀರ ಆರೋಪ. ನಿಯಮ ಉಲ್ಲಂಘಿಸುವ ವಾಹನಗಳ ವಿರುದ್ಧ ಕ್ರಮ ಕೈಗೊಳ್ಳಬೇಕಾದ ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಜಾಣ ಮೌನಕ್ಕೆ ಶರಣಾಗಿದ್ದಾರೆ ಎಂದು ಗ್ರಾಮಸ್ಥರು ಕಿಡಿಕಾ–ರಿದರು.

● ಅಧಿಕಾರಿಗಳ ಕಣ್ಣಿಗೆ ಕಾಣದ ರಸ್ತೆ ಗುಂಡಿಗಳು

ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಸಾಮಾಜಿಕ ಹೋರಾಟಗಾರ ಮೊಹಮ್ಮದ್ ಆಸೀಫ್, ಬೇಲೂರಿನಿಂದ ಬಿಕ್ಕೋಡು ಮಾರ್ಗವಾಗಿ ಲಕ್ಕುಂದದವರೆಗೆ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಹದಗೆಟ್ಟಿದೆ. ಭಾರಿ ವಾಹನಗಳ ಅತಿಯಾದ ಸಂಚಾರದಿಂದ ರಸ್ತೆ ತನ್ನ ಅಸ್ತಿತ್ವವನ್ನೇ ಕಳೆದುಕೊಳ್ಳುವ ಹಂತ ತಲುಪಿದೆ. ಇದೇ ರಸ್ತೆಯಲ್ಲಿ ಸಂಚರಿಸುವ ಆರ್‌ಟಿಒ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಈ ಅವ್ಯವಸ್ಥೆ ಕಾಣುತ್ತಿಲ್ಲವೇ ಎಂದು ಪ್ರಶ್ನಿಸಿದರು.

ನಿಯಮ ಉಲ್ಲಂಘಿಸಿ ಅಧಿಕ ಭಾರ ಹೊತ್ತ ವಾಹನಗಳನ್ನು ತಕ್ಷಣ ವಶಕ್ಕೆ ಪಡೆದು ದಂಡ ವಿಧಿಸಬೇಕು. ರಸ್ತೆ ಗುಂಡಿಗಳಿಗೆ ತಾತ್ಕಾಲಿಕವಾಗಿ ಮಣ್ಣು ತುಂಬಿಸುವ ನಾಟಕ ಕೈಬಿಟ್ಟು, ಸರ್ಕಾರ ವಿಶೇಷ ಅನುದಾನ ಬಿಡುಗಡೆ ಮಾಡಿ ಗುಣಮಟ್ಟದ ಕಾಮಗಾರಿಯ ಮೂಲಕ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

● ಮನವಿ ಸಲ್ಲಿಸಿದರೂ ಪ್ರಯೋಜನವಿಲ್ಲ

ಬಿಕ್ಕೋಡು ಬಸವರಾಜು ಮಾತನಾಡಿ, ರಸ್ತೆ ದುಸ್ಥಿತಿ ಹಾಗೂ ಅಧಿಕ ಭಾರದ ಲಾರಿಗಳ ಸಂಚಾರದ ಕು–ರಿತು ಜಿಲ್ಲಾಧಿಕಾರಿ, ಪ್ರಾದೇಶಿಕ ಸಾರಿಗೆ ಇಲಾಖೆ ಮತ್ತು ಲೋಕೋಪಯೋಗಿ ಇಲಾಖೆ ಅಧಿಕಾ–ರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಅಧಿಕಾರಿಗಳನ್ನು ಪ್ರಶ್ನಿಸಿದರೆ ಹಾಸನಾಂಬೆ ಜಾತ್ರೆಯ ನೆಪ ಹೇಳಿ ಕ್ರಮ ಕೈಗೊಳ್ಳುವುದನ್ನು ಮುಂದೂಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದೇ ನಿರ್ಲಕ್ಷ್ಯ ಮುಂದುವರಿದರೆ ಮುಂದಿನ ದಿನಗಳಲ್ಲಿ ರಸ್ತೆ ಸಂಪೂರ್ಣ ಹಾಳಾಗಿ ಸಂಚಾರವೇ ದುಸ್ತರವಾಗಲಿದೆ. ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಭಾರಿ ವಾಹನಗಳ ಸಂಚಾರಕ್ಕೆ ಕಡಿವಾಣ ಹಾಕಬೇಕು. ಇಲ್ಲದಿದ್ದರೆ ಸಾರ್ವಜನಿಕರ ಸಹಭಾಗಿತ್ವದಲ್ಲಿ ಇನ್ನಷ್ಟು ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

● ಬೇಲೂರು–ಸಕಲೇಶಪುರ ರಸ್ತೆ ಬಂದ್ ಎಚ್ಚರಿಕೆ

ಸಮಸ್ಯೆ ಬಗೆಹರಿಸಲು ಸಂಬಂಧಪಟ್ಟ ಅಧಿಕಾ–ರಿಗಳು ಹಾಗೂ ಜನಪ್ರತಿನಿಧಿಗಳು ಇನ್ನಾದರೂ ಎಚ್ಚೆತ್ತುಕೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ಹಂತದಲ್ಲಿ ಇಡೀ ದಿನ ಬೇಲೂರು–ಸಕಲೇಶಪುರ ರಸ್ತೆ ಬಂದ್ ಮಾಡಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಅಮಿತ್ ಕುಮಾರ್ ಶೆಟ್ಟಿ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ಸಂಜು ಕೌರಿ, ಕೆಡಿಪಿ ಸದಸ್ಯ ಚೇತನ್‌ಗೌಡ, ಕರವೇ ಗೌರವಾಧ್ಯಕ್ಷ ಕೋಗಿಲಮನೆ ಕುಮಾರ್, ತಾಲೂಕು ಪಂಚಾಯಿತಿ ಮಾಜಿ ಉಪಾಧ್ಯಕ್ಷ ಮೋಹನ್ ಕುಮಾರ್, ಮುಖಂಡರಾದ ಅದ್ದೂರಿ ಕುಮಾರ್, ಸಿದ್ದೇಗೌಡ, ಲೋಕೇಶ್‌ಗೌಡ, ಹ–ರೀಶ್, ಜಗದೀಶ್, ವೆಂಕಟೇಶ್, ವಿಜಯಕುಮಾರ್ ಸೇ–ರಿದಂತೆ ಬಿಕ್ಕೋಡು ಹಾಗೂ ಅರೇಹಳ್ಳಿ ಭಾಗದ ವಿವಿಧ ಗ್ರಾಮಗಳ ನೂರಾರು ಗ್ರಾಮಸ್ಥರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



60ರಿಂದ 70 ಟನ್ ಭಾರದ ಲಾರಿಗಳು ರಸ್ತೆಯನ್ನು ಹಾಳು ಮಾಡುತ್ತಿದ್ದರೂ ಆರ್‌ಟಿಒ ಮತ್ತು ಲೋಕೋಪಯೋಗಿ ಇಲಾಖೆ ಅಧಿಕಾ–ರಿಗಳು ಕುರುಡರಂತೆ ವರ್ತಿಸುತ್ತಿರುವುದೇಕೆ, ಜನರ ಸಂಕಷ್ಟಕ್ಕೆ ಹೊಣೆ ಯಾರು, ಗುಂಡಿಗಳಿಗೆ ಮಣ್ಣು ತುಂಬಿಸುವ ನಾಟಕ ಬಿಟ್ಟು, ಅತಿಭಾರದ ಲಾರಿಗಳಿಗೆ ಕಡಿವಾಣ ಹಾಕಿ, ಶಾಶ್ವತ ರಸ್ತೆ ನಿರ್ಮಿಸಿ. ಇಲ್ಲದಿದ್ದರೆ ಜನರ ಆಕ್ರೋಶಕ್ಕೆ ಅಧಿಕಾರಿಗಳೇ ಉತ್ತ–ರಿಸಬೇಕಾಗುತ್ತದೆ



– ಸಾಮಾಜಿಕ ಹೋರಾಟಗಾರ ಮೊಹಮ್ಮದ್ ಆಸೀಫ್

ಹಾಸನಾಂಬೆ ದರ್ಶನಕ್ಕೆ ಮುಂದಿನ ವರ್ಷಗಳಲ್ಲಿ ಸ್ಥಳಾವಕಾಶದ ಕೊರತೆ ಸಾಧ್ಯತೆ: ನಾರಾಯಣಗೌಡ

ಪ್ರಜಾ ಭಾರತ ವರದಿ

ಹಾಸನ: ಹಾಸನಾಂಬೆ ದೇವಿಯ ದರ್ಶನಕ್ಕೆ ವರ್ಷದಿಂದ ವರ್ಷಕ್ಕೆ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದ್ದು, ಮುಂದಿನ ವರ್ಷಗಳಲ್ಲಿ ಭಕ್ತರ ಸಂಖ್ಯೆಗೆ ಅನುಗುಣವಾಗಿ ಈಗಿರುವ ಸ್ಥಳಾವಕಾಶ ಸಾಲದಾಗುವ ಸಾಧ್ಯತೆಯಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಅಭಿಪ್ರಾಯಪಟ್ಟರು.

ನಗರದ ಹಾಸನಾಂಬೆ ದೇವಾಲಯಕ್ಕೆ ಮಂಗಳವಾರ ಭೇಟಿ ನೀಡಿ ದೇವಿಯ ದರ್ಶನ ಪಡೆದ ಬಳಿಕ ಮಾತನಾಡಿದ ಅವರು, ಈ ಬಾರಿ ರಾಜ್ಯ ಸರ್ಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ನೇತೃತ್ವದಲ್ಲಿ ಭಕ್ತರಿಗೆ ಉತ್ತಮ ವ್ಯವಸ್ಥೆ ಕಲ್ಪಿಸಲಾಗಿದೆ. ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ. ಸಾರ್ವಜನಿಕ ದರ್ಶನದ ಅವಧಿಯನ್ನು ಇನ್ನಷ್ಟು ದಿನ ವಿಸ್ತರಿಸಿದರೆ ಜಿಲ್ಲೆಯ ಅಭಿವೃದ್ಧಿಗೆ ಅನುಕೂಲವಾಗಲಿದೆ ಎಂದರು.



ಹಾಸನಾಂಬೆ ತಾಯಿ ನಾಡಿನ ಜನರಿಗೆ ಆರೋಗ್ಯ, ಆಯುಷ್ಯ, ಸಮೃದ್ಧಿ ಕರುಣಿಸಲಿ ಹಾಗೂ ಉತ್ತಮ ಮಳೆಯಾಗಿ ರೈತರು ಸುಖವಾಗಿರಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು. ಕರ್ನಾಟಕ ರಕ್ಷಣಾ ವೇದಿಕೆ ಕಳೆದ 40 ವರ್ಷಗಳಿಂದ ಕಾವೇರಿ, ಮಹದಾಯಿ, ಕೃಷ್ಣಾ ನದಿ ನೀರಿನ ಹಂಚಿಕೆ, ಬೆಳಗಾವಿ ಗಡಿ ವಿವಾದ, ರೈತರ ಸಮಸ್ಯೆ ಹಾಗೂ ಕನ್ನಡಿಗರ ಉದ್ಯೋಗದ ಹಕ್ಕಿಗಾಗಿ ನಿರಂತರ ಹೋರಾಟ ನಡೆಸುತ್ತಿದೆ. ಕಾವೇರಿ ವಿವಾದಕ್ಕೆ ಶಾಶ್ವತ ಪರಿಹಾರ ಕಲ್ಪಿಸುವುದರ ಜೊತೆಗೆ ಮಹದಾಯಿ ಯೋಜನೆ ಜಾರಿಗೆ ಕ್ರಮ ಕೈಗೊಳ್ಳಬೇಕು. ರೈತರ ಬೆಳೆಗಳಿಗೆ ನ್ಯಾಯಯುತ ಬೆಲೆ ದೊರೆಯಬೇಕು ಎಂದು ಒತ್ತಾಯಿಸಿದರು.ರಾಜ್ಯದಲ್ಲಿ ಕನ್ನಡಿಗ–ರಿಗೆ ಉದ್ಯೋಗಾವಕಾಶ ಕಲ್ಪಿಸುವಂತೆ ಆಗ್ರಹಿಸಿ ಐಟಿ ಕಂಪನಿಗಳ ವಿರುದ್ಧ ಕರವೇ ಬೃಹತ್ ಆಂದೋಲನ ಆರಂಭಿಸಿದೆ. ಇದಕ್ಕಾಗಿ 10 ತಂಡಗಳನ್ನು ರಚಿಸಲಾಗಿದ್ದು, ರಾಜ್ಯದ 2 ಸಾವಿರಕ್ಕೂ ಅಧಿಕ ಐಟಿ ಕಂಪನಿಗಳನ್ನು ಹೋರಾಟದ ವ್ಯಾಪ್ತಿಗೆ ತರಲು ಉದ್ದೇಶಿಸಲಾಗಿದೆ. ಮೊದಲ ಹಂತದಲ್ಲಿ 100 ಕಂಪನಿಗಳಿಗೆ ಮನವಿ ಸಲ್ಲಿಸಿ, ಒಟ್ಟು ಉದ್ಯೋಗಿಗಳ ಸಂಖ್ಯೆ, ಕನ್ನಡಿಗರ ಪ್ರಮಾಣ ಹಾಗೂ ಅವರಿಗೆ ನೀಡಿರುವ ಹುದ್ದೆಗಳ ಕುರಿತು ಮಾಹಿತಿ ಕೇಳಲಾಗಿದೆ ಎಂದು ತಿಳಿಸಿದರು.

ಕನ್ನಡಿಗರ ಉದ್ಯೋಗದ ಹಕ್ಕು ಮತ್ತು ಯುವಜನರ ಭವಿಷ್ಯ ರಕ್ಷಿಸುವುದು ಮುಖ್ಯವಾಗಿದ್ದು, ಐಟಿ ಕಂಪನಿಗಳು ಸ್ಥಳೀಯರಿಗೆ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ಕರವೇ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಸಿ.ಡಿ. ಮನುಕುಮಾರ್, ಶಿವಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಹಾಸನಾಂಬೆ ದರ್ಶನಕ್ಕೆ 9 ಲಕ್ಷ ಭಕ್ತರು; ರೂ.5.72 ಕೋಟಿ ಆದಾಯ

ಕಾಂಗ್ರೆಸ್ ಜಿಲ್ಲಾಧ್ಯಕ್ಷರಿಗೆ ರೂ.5 ಲಕ್ಷ ಮೌಲ್ಯದ ಟಿಕೆಟ್ ಹಂಚಿಕೆ: ಸಚಿವ ಶಿವಲಿಂಗೇಗೌಡ ಸ್ಪಷ್ಟನೆ

ಪ್ರಜಾ ಭಾರತ ವರದಿ

ಹಾಸನ: ನಾಡಿನ ಪ್ರಸಿದ್ಧ ಶಕ್ತಿಪೀಠ ಶ್ರೀ ಹಾಸನಾಂಬೆ ದೇವಿಯ ದರ್ಶನಕ್ಕೆ ಈ ಬಾರಿ ಭಕ್ತಸಾಗರವೇ ಹರಿದುಬಂದಿದ್ದು, ಇದುವರೆಗೆ ಸುಮಾರು 9 ಲಕ್ಷ ಭಕ್ತರು ದರ್ಶನ ಪಡೆದಿದ್ದಾರೆ. ಟಿಕೆಟ್ ಹಾಗೂ ಲಾಡು ಮಾರಾಟದಿಂದ ಒಟ್ಟು ರೂ.5.72 ಕೋಟಿ ಆದಾಯ ಸಂಗ್ರಹವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ತಿಳಿಸಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಧ್ಯರಾತ್ರಿ ವೇಳೆಯೂ ಭಕ್ತರ ದಟ್ಟಣೆ ಕಡಿಮೆಯಾಗುತ್ತಿಲ್ಲ. ತಣ್ಣೀರುಹಳ್ಳದ ಎಸ್.ಡಿ.ಎಂ. ಕಾಲೇಜುವರೆಗೂ ಸರತಿ ಸಾಲು ವಿಸ್ತರಿಸಿದೆ. ಭಕ್ತರಿಗೆ ತೊಂದರೆಯಾಗದಂತೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಉತ್ತಮ ವ್ಯವಸ್ಥೆ ಮಾಡಿವೆ. ಧರ್ಮದರ್ಶನ ಹಾಗೂ ರೂ.300 ಟಿಕೆಟ್ ದರ್ಶನಕ್ಕೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.



ಸಾಮಾನ್ಯ ಭಕ್ತರಿಗೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ವಿಶೇಷ ಪಾಸ್‌ಗಳ ಸಂಖ್ಯೆಯನ್ನು ಮಿತಿಗೊಳಿಸಲಾಗಿದೆ. ಜಿಲ್ಲಾಡಳಿತದಿಂದ 20 ಸಾವಿರ ಪಾಸ್‌ಗಳನ್ನು ಸಿದ್ಧಪಡಿಸಲಾಗಿದ್ದು, ಪ್ರತಿದಿನ ಬೆಳಗ್ಗೆ 6ರಿಂದ 8 ಗಂಟೆಯವರೆಗೆ ಪಾಸ್ ಹೊಂದಿದವರಿಗೆ ದರ್ಶನಕ್ಕೆ ಅವಕಾಶ ನೀಡಲಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಶಶಿಧರ್ ಅವ–ರಿಗೆ ಪಾಸ್ ನೀಡಿಲ್ಲ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಅವರಿಗೆ ತಲಾ ರೂ.1,000 ಮೌಲ್ಯದ 500 ಟಿಕೆಟ್‌ಗಳನ್ನು ಖರೀದಿಸಿ ನೀಡಲಾಗಿದೆ. ಒಟ್ಟು ರೂ.5 ಲಕ್ಷ ಮೌಲ್ಯದ ಟಿಕೆಟ್‌ಗಳನ್ನು ಪಕ್ಷದ ಮುಖಂಡರಿಗೆ ಹಂಚಿಕೆ ಮಾಡಲು ನೀಡಲಾಗಿದ್ದು, ಇದರಲ್ಲಿ ಯಾವುದೇ ರಾಜಕೀಯ ಉದ್ದೇಶ ಅಥವಾ ಪಕ್ಷಪಾತವಿಲ್ಲ ಎಂದು ಸ್ಪಷ್ಟಪಡಿಸಿದರು. ಜಾತ್ರೆಯ ಅಂಗವಾಗಿ ಕಬಡ್ಡಿ ಸೇ–ರಿದಂತೆ ವಿವಿಧ ಕ್ರೀಡಾಕೂಟಗಳನ್ನು ಆಯೋಜಿಸಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಸುಗಳ ಪ್ರದರ್ಶನದಲ್ಲಿ ಭಾಗವಹಿಸಿದ ರೈತರು ಹಾಗೂ ಮಾಲೀಕ–ರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ರೂ.5 ಲಕ್ಷ ವೆಚ್ಚದಲ್ಲಿ ಸಮಾಧಾನಕರ ಬಹುಮಾನ ವಿತರಿಸಲಾಗಿದೆ ಎಂದರು. ಜಿಲ್ಲೆಯಲ್ಲಿ ಯಾವುದೇ ಭಿನ್ನಮತ ಅಥ–'ವಾ ಗೊಂದಲಗಳಿಲ್ಲ. ಮಾಜಿ ಸಚಿವ ಎಚ್.ಡಿ. ರೇವಣ್ಣ ಸೇರಿದಂತೆ ಎಲ್ಲ ಗಣ್ಯರಿಗೂ ಶಿಷ್ಟಾಚಾರದಂತೆ ಆಹ್ವಾನ ನೀಡಲಾಗುತ್ತಿದೆ. ಹಾಸನಾಂಬೆ ಜಾತ್ರೆಯ ಯಶಸ್ಸಿಗೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಅರ್ಚಕರು, ಸಿಬ್ಬಂದಿ, ಮಾಧ್ಯಮಗಳು ಹಾಗೂ ಸಾರ್ವಜನಿಕರ ಸಹಕಾರ ಕಾರಣವಾಗಿದೆ ಎಂದು ಸಚಿವರು ತಿಳಿಸಿದರು.

ಮಹಿಳೆಯರಿಗೆ ಅಧಿಕಾರದಲ್ಲಿ ಪಾಲು ಸಿಗದಿದ್ದರೆ ಸಬಲೀಕರಣದ ಸಂದೇಶ ಹೇಗೆ: ನಯನ ಮೋಟಮ್ಮ

ಸಚಿವ ಸ್ಥಾನಕ್ಕಾಗಿ ಮಹಿಳಾ ಶಾಸಕರ ಧ್ವನಿ; ಹಕ್ಕಿಗಾಗಿ ಮಾತನಾಡುವುದು ನನ್ನ ಜವಾಬ್ದಾರಿ

ಪ್ರಜಾ ಭಾರತ ವರದಿ

ಹಾಸನ: ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುವ ರಾಜಕೀಯ ಪಕ್ಷಗಳು ಅಧಿಕಾರ ಹಂಚಿಕೆಯಲ್ಲಿಯೂ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಬೇಕು. ಮಹಿಳಾ ಶಾಸಕರಿಗೆ ಸಚಿವ ಸ್ಥಾನ ನೀಡುವಲ್ಲಿ ವಿಳಂಬವಾಗುತ್ತಿರುವುದು ನೋವು ತಂದಿದೆ ಎಂದು ಮೂಡಿಗೆರೆ ಶಾಸಕಿ ನಯನ ಮೋಟಮ್ಮ ಅಸಮಾಧಾನ ವ್ಯಕ್ತಪಡಿಸಿದರು.



ಮಂಗಳವಾರ ಹಾಸನಾಂಬೆ ದೇವಿಯ ದರ್ಶನ ಪಡೆದ ಬಳಿಕ ಮಾತನಾಡಿದ ಅವರು, ಮಹಿಳೆಯರಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಕಲ್ಪಿಸುವ ಬೇಡಿಕೆ ವೈಯಕ್ತಿಕ ಹಿತಾಸಕ್ತಿಯದ್ದಲ್ಲ. ಇದು ಮಹಿಳೆಯರ ರಾಜಕೀಯ ಹಕ್ಕು ಮತ್ತು ಸಮಾನ ಅವಕಾಶದ ಪ್ರಶ್ನೆಯಾಗಿದೆ ಎಂದರು.

ಮಹಿಳೆಯರು ಚುನಾವಣೆಯಲ್ಲಿ ಗೆದ್ದು ಶಾಸಕರಾಗುತ್ತಿದ್ದರೂ ಅಧಿಕಾರದ ಹಂಚಿಕೆಯಲ್ಲಿ ಸೂಕ್ತ ಅವಕಾಶ ಸಿಗದಿದ್ದರೆ ಸಬಲೀಕರಣದ ಸಂದೇಶ ಹೇಗೆ ನೀಡಲು ಸಾಧ್ಯ? ಮಹಿಳೆಯರ ಪರವಾಗಿ ಧ್ವನಿ ಎತ್ತುವವರಿಗೆ ಆಡಳಿತದಲ್ಲಿ ಜವಾಬ್ದಾರಿ ನೀಡಬೇಕು ಎಂದು ಒತ್ತಾಯಿಸಿದರು.

ಸಚಿವ ಸ್ಥಾನಕ್ಕಾಗಿ ಮಾತನಾಡುವುದರಿಂದ ರಾಜ–ಕೀಯವಾಗಿ ತೊಂದರೆಯಾಗಬಹುದು, ಸಿಗಬಹುದಾದ ಅವಕಾಶವೂ ಕೈತಪ್ಪಬಹುದು ಎಂಬ ಆತಂಕವಿದೆ. ಆದರೂ ವೈಯಕ್ತಿಕ ಅವಕಾಶಕ್ಕಿಂತ ಮಹಿಳೆಯರ ಹಿತಾಸಕ್ತಿ ಮುಖ್ಯ. ಮಹಿಳಾ ಶಾಸಕಿಯಾಗಿ ಅವರ ಪರವಾಗಿ ಧ್ವನಿ ಎತ್ತದಿದ್ದರೆ ಅದಕ್ಕಿಂತ ನಾಚಿಕೆಗೇಡಿನ ಸಂಗತಿ ಮತ್ತೊಂದಿಲ್ಲ. ಹೀಗಾಗಿ ಹಕ್ಕಿಗಾಗಿ ಮಾತನಾಡುವುದು ನನ್ನ ಜವಾಬ್ದಾರಿ ಎಂದು ಸ್ಪಷ್ಟಪಡಿಸಿದರು.

ಮಹಿಳಾ ಶಾಸಕರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ಕಲ್ಪಿಸುವಂತೆ ಪಕ್ಷದ ವರಿಷ್ಠರು ಶೀಘ್ರ ನಿರ್ಧಾರ ಕೈಗೊಳ್ಳಬೇಕು ಎಂದು ಆಶಿಸಿದರು.

ಪ್ರಜಾ ಭಾರತ
ಶುಭ ನುಡಿ

ಕೆಲವೊಮ್ಮೆ ಗೆಲ್ಲುವುದಕ್ಕಿಂತ ಕುಗ್ಗದೆ ಬದುಕುಳಿಯುವುದೇ ದೊಡ್ಡ ಗೆಲುವು.

ಇಂದು ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರ ಪ್ರವಾಸ

ಹಾಸನ :ರಾಜ್ಯ ಮದ್ಯಪಾನ ಸಂಂಯಮ ಮಂಡಳಿ ಅಧ್ಯಕ್ಷರಾದ ಶರಣಪ್ಪ ಸಲಾದಪುರ ಅವರು ಇಂದು ಬೆಳಗ್ಗೆ 11 ಗಂಟೆಗೆ ಹಿರೀಸಾವೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗಾಂಧಿ ವ್ಯಕ್ತಿ ವಿಚಾರ ಪ್ರಚಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವರು ನಂತರ ಮದ್ಯಾಹ್ನ 2 ಗಂಟಗೆ ಬೆಂಗಳೂರಿಗೆ ಪ್ರಯಾಣ ಮಾಡಲಿರುವರು.

ಪತ್ರಿಕೋದ್ಯಮದ ಬದ್ಧತೆ, ಛಾಯಾಗ್ರಹಣದ ನೈಪುಣ್ಯ : ಪಡುವಳಲಿನ ಚಂದ್ರಶೇಖರ್‌ಗೆ ಸನ್ಮಾನದ ಗೌರವ

ಪ್ರಜಾ ಭಾರತ ವರದಿ

ಬೇಲೂರು: ಪತ್ರಿಕೋದ್ಯಮವೆಂದರೆ ಕೇವಲ ಸುದ್ದಿಗಳನ್ನು ಬರೆಯುವ ವೃತ್ತಿಯಲ್ಲ; ಅದು ಸಮಾಜದ ನೋವು–ನಲಿವುಗಳಿಗೆ ಸ್ಪಂದಿಸುವ, ಜನರ ಸಮಸ್ಯೆಗಳಿಗೆ ಧ್ವನಿಯಾಗುವ ಜವಾಬ್ದಾರಿಯುತ ಸೇವೆ. ಇಂತಹ ಸಮಾಜಮುಖಿ ಕಾರ್ಯದಲ್ಲಿ ಕಳೆದ 14 ವರ್ಷಗಳಿಂದ ತೊಡಗಿಸಿಕೊಂಡು, ಪತ್ರಿಕೋದ್ಯಮದ ಜೊತೆಗೆ ಛಾಯಾಗ್ರಹಣ ಹಾಗೂ ಸಾಮಾಜಿಕ ಸೇವೆಯಲ್ಲಿಯೂ ತಮ್ಮದೇ ಆದ ಗುರುತು ಮೂಡಿಸಿರುವವರು ಬೇಲೂರು ತಾಲ್ಲೂಕಿನ ಪಡುವಳಲು ಗ್ರಾಮದ ಪಿ.ಡಿ. ಚಂದ್ರಶೇಖರ್.

ಶ್ರೀಮತಿ ಭಾಗೀರತಿ ದುರ್ಗೇಶ್ ದಂಪತಿಯ ದ್ವಿತೀಯ ಪುತ್ರರಾಗಿ ಜನಿಸಿದ ಚಂದ್ರಶೇಖರ್ ಅವರು, ಗ್ರಾಮೀಣ ಪರಿಸರದಲ್ಲಿ ಬೆಳೆದು ಶಿಕ್ಷಣದ ಮೂಲಕ ತಮ್ಮ ಜ್ಞಾನವನ್ನು ವಿಸ್ತರಿಸಿಕೊಂಡವರು. ಪಡುವಳಲು ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಪಡೆದ ಇವರು, ಮೈಸೂರು ವಿಶ್ವವಿದ್ಯಾಲಯದಲ್ಲಿ ಬಿ.ಕಾಂ ಪದವಿ, ಪತ್ರಿಕೋದ್ಯಮ ಪದವಿ ಹಾಗೂ ಮುಕ್ತ ವಿಶ್ವವಿದ್ಯಾಲಯದಲ್ಲಿ ಗ್ರಾಮೀಣ ಅಭಿವೃದ್ಧಿ ಪದವಿ (ಡಿ.ಆರ್.ಡಿ.) ಪಡೆದು ವೃತ್ತಿಜೀವನಕ್ಕೆ ಭದ್ರ ಬುನಾದಿ ಹಾಕಿಕೊಂಡಿದ್ದಾರೆ.

● 14 ವರ್ಷಗಳ ಪತ್ರಿಕೋದ್ಯಮದ ಅನುಭವ

ಕನ್ನಡದ ಪ್ರಮುಖ ದಿನಪತ್ರಿಕೆಗಳಲ್ಲಿ ಒಂದಾದ ವಿಜಯವಾಣಿಯಲ್ಲಿ ಕಳೆದ 14 ವರ್ಷಗಳಿಂದ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿರುವ ಚಂದ್ರಶೇಖರ್ ಅವರು, ಸ್ಥಳೀಯ ಸಮಸ್ಯೆಗಳು, ಜನರ ಆಶೋತ್ತರಗಳು ಹಾಗೂ ಸಮಾಜದ ಆಗುಹೋಗುಗಳನ್ನು ವರದಿಗಳ ಮೂಲಕ ಜನರಿಗೆ ತಲುಪಿಸುವ



ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ.

ಪತ್ರಿಕೋದ್ಯಮದ ವೃತ್ತಿಪರ ಜವಾಬ್ದಾರಿಯನ್ನು ನಿಭಾಯಿಸುವುದರ ಜೊತೆಗೆ ಪತ್ರಕರ್ತರ ಸಂಘಟನಾತ್ಮಕ ಚಟುವಟಿಕೆಗಳಲ್ಲಿಯೂ ಸಕ್ರಿಯರಾಗಿದ್ದಾರೆ. ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಎಂಟು ವರ್ಷಗಳಿಂದ ಸದಸ್ಯರಾಗಿ ಸೇವೆ ಸಲ್ಲಿಸಿರುವ ಇವರು, ಪ್ರಸ್ತುತ ಸಂಘದ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

● ಛಾಯಾಗ್ರಹಣದಲ್ಲೂ ಎರಡು ದಶಕಗಳ ಪಯಣ

ಪತ್ರಿಕೋದ್ಯಮದ ಜೊತೆಗೆ ಛಾಯಾಗ್ರಹಣವನ್ನೂ ತಮ್ಮ ವೃತ್ತಿಜೀವನದ ಅವಿಭಾಜ್ಯ ಅಂಗವಾಗಿಸಿಕೊಂಡಿರುವ ಚಂದ್ರಶೇಖರ್ ಅವರು, ಕಳೆದ 20 ವರ್ಷಗಳಿಂದ ಛಾಯಾಗ್ರಾಹಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕ್ಷಣಗಳನ್ನು ಚಿತ್ರಗಳ ಮೂಲಕ ಸೆರೆಹಿಡಿಯುವ ಕೌಶಲದೊಂದಿಗೆ ಈ ಕ್ಷೇತ್ರದಲ್ಲಿ ಅನುಭವ ಸಂಪಾದಿಸಿರುವ ಇವರು, ಪ್ರಸ್ತುತ ಬೇಲೂರು ತಾಲ್ಲೂಕು ವೃತ್ತಿಪರ ಛಾಯಾಗ್ರಾಹಕರ ಸಂಘದ ಅಧ್ಯಕ್ಷರಾಗಿ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಪತ್ರಿಕೋದ್ಯಮ ಮತ್ತು ಛಾಯಾಗ್ರಹಣ ಎರಡೂ ಕ್ಷೇತ್ರಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವ ಮೂಲಕ ವೃತ್ತಿಪರ ಅನುಭವವನ್ನು ಬೆಳೆಸಿಕೊಂಡಿರುವ ಇವರು, ವಿವಿಧ ಸಂಘಟನೆಗಳಲ್ಲಿಯೂ ಗುರುತಿಸಿ ಕೊಂಡಿದ್ದಾರೆ. ಸಾಮಾಜಿಕ ಸೇವೆಯಲ್ಲಿನ ಆಸಕ್ತಿ ಹಾಗೂ ಸಂಘಟನಾತ್ಮಕ ಕಾರ್ಯಚಟುವಟಿಕೆಗಳಲ್ಲಿನ ಪಾಲ್ಗೊಳ್ಳುವಿಕೆ ಇವರ ವ್ಯಕ್ತಿತ್ವಕ್ಕೆ ಮತ್ತಷ್ಟು ಮೆರುಗು ನೀಡಿದೆ.

● ಸೇವೆಯನ್ನು ಗುರುತಿಸಿ ಸನ್ಮಾನ

ಒಂದು ವೃತ್ತಿಯಲ್ಲಿ ದೀರ್ಘಕಾಲ ಸೇವೆ ಸಲ್ಲಿಸುವುದರ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಜವಾಬ್ದಾರಿಗಳನ್ನು ನಿಭಾಯಿಸುವುದು ಬದ್ಧತೆ ಮತ್ತು ಪರಿಶ್ರಮದ ಪ್ರತೀಕ. ಈ ನಿಟ್ಟಿನಲ್ಲಿ ಪಿ.ಡಿ. ಚಂದ್ರಶೇಖರ್ ಅವರ ಪತ್ರಿಕೋದ್ಯಮದ ಅನುಭವ, ಛಾಯಾಗ್ರಹಣ ಕ್ಷೇತ್ರದ ಸೇವೆ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿನ ಪಾಲ್ಗೊಳ್ಳುವಿಕೆಯನ್ನು ಪರಿಗಣಿಸಿ, ಬೇಲೂರು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ವತಿಯಿಂದ ಸನ್ಮಾನಿಸಲು ನಿರ್ಧರಿಸಿರುವುದು ಅವರ ಸೇವೆಗೆ ದೊರೆಯುತ್ತಿರುವ ಗೌರವವಾಗಿದೆ. ಪತ್ರಿಕೋದ್ಯಮದ ಮೂಲಕ ಸಮಾಜದ ಆಗುಹೋಗುಗಳಿಗೆ ಸಾಕ್ಷಿಯಾಗುತ್ತಾ, ಛಾಯಾಗ್ರಹಣದ ಮೂಲಕ ನೆನಪುಗಳನ್ನು ದಾಖಲಿಸುತ್ತಾ, ಸಂಘಟನಾತ್ಮಕ ಚಟುವಟಿಕೆಗಳ ಮೂಲಕ ಸಹೋದ್ಯೋಗಿಗಳೊಂದಿಗೆ ಬೆರೆಯುತ್ತಾ ಸಾಗುತ್ತಿರುವ ಪಿ.ಡಿ. ಚಂದ್ರಶೇಖರ್ ಅವರ ಸೇವಾಯಾನಕ್ಕೆ ಈ ಸನ್ಮಾನ ಮತ್ತಷ್ಟು ಪ್ರೋತ್ಸಾಹ ನೀಡಲಿ ಎಂಬುದು ಪ್ರಜಾ ಭಾರತ ಪತ್ರಿಕೆಯ ಹಾರೈಕೆ.

ನಾಡು–ನುಡಿಯ ಸೇವೆಗೆ ತೀರ್ಥಂಕರ್‌ಗೆ ಸನ್ಮಾನ

ಮೌಂಟ್ ಕಾರ್ಮೆಲ್ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಸಂಭ್ರಮ

ಪ್ರಜಾ ಭಾರತ ವರದಿ

ಬೇಲೂರು: ಕನ್ನಡ ಭಾಷೆ, ನೆಲ, ಜಲ ಹಾಗೂ ನಾಡಿನ ಸಂಸ್ಕೃತಿಯ ಉಳಿವಿಗಾಗಿ ನಿರಂತರವಾಗಿ ಶ್ರಮಿಸುತ್ತಿರುವ ಕನ್ನಡಪರ ಹೋರಾಟಗಾರ ಬಿ.ಆರ್. ತೀರ್ಥಂಕರ್ ಅವರನ್ನು ಪಟ್ಟಣದ ಜೆ.ಪಿ. ನಗರದ ಮೌಂಟ್ ಕಾರ್ಮೆಲ್ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಫಾದರ್ ಜೋಸೆಫ್ ಪಿಂಟೋ, ನಾಡು, ನುಡಿ ಹಾಗೂ ಸಂಸ್ಕೃತಿಯ ಉಳಿವಿಗಾಗಿ ಶ್ರಮಿಸುವ ಕನ್ನಡಪರ ಹೋರಾಟಗಾರರನ್ನು ಗುರುತಿಸಿ ಗೌರವಿಸುವುದು ಶಿಕ್ಷಣ ಸಂಸ್ಥೆಗಳ ಕರ್ತವ್ಯವಾಗಿದೆ. ಬೇಲೂರಿನ ವಾಟಾಳ್ ಎಂದೇ ಗುರುತಿಸಿಕೊಂಡಿರುವ ತೀರ್ಥಂಕರ್ ಅವರು ಕನ್ನಡಪರ ಹೋರಾಟ ಹಾಗೂ ವಿವಿಧ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಮುಂಚೂಣಿಯಲ್ಲಿ



ಭಾಗವಹಿಸುತ್ತಿರುವುದು ಶ್ಲಾಘನೀಯ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ತೀರ್ಥಂಕರ್, ಕನ್ನಡ ಭಾಷೆ, ನೆಲ, ಜಲ ಹಾಗೂ ನಾಡಿನ ಹಿತಕ್ಕಾಗಿ ಸಲ್ಲಿಸುತ್ತಿರುವ ಅಲ್ಪ ಸೇವೆಯನ್ನು ಗುರುತಿಸಿ ಮೌಂಟ್ ಕಾರ್ಮೆಲ್ ಶಾಲೆಯ ಆಡಳಿತ ಮಂಡಳಿ ಗೌರವಿಸಿರುವುದು ಸಂತೋಷ ತಂದಿದೆ. ಮುಂದೆಯೂ ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯ ಸೇವೆಯಲ್ಲಿ ತೊಡಗಿಸಿಕೊಳ್ಳುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಾಂಶುಪಾಲ ಫಾದರ್ ಅಂತೋನ್ ಸೋಜ್, ಅಧ್ಯಾಪಕಿ ಗೀತಾ, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕನ್ನಡಿಗರ ಉದ್ಯೋಗದ ಹಕ್ಕಿಗಾಗಿ ಧ್ವನಿ ಎತ್ತಿದ ಮಲೆನಾಡು ರಕ್ಷಣಾ ಸೇನೆ

ಐಟಿ ಕಂಪನಿಗಳ ನೇಮಕಾತಿ ವ್ಯವಸ್ಥೆ ಪರಿಶೀಲಿಸಿ, ಸ್ಥಳೀಯ ಯುವಜನರಿಗೆ ಆದ್ಯತೆ ನೀಡಲು ಮಂಜುದೇವ್ ಒತ್ತಾಯ

ಪ್ರಜಾ ಭಾರತ ವರದಿ

ಸಕಲೇಶಪುರ: ಕರ್ನಾಟಕದಲ್ಲಿ ಸಾವಿರಾರು ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿದ್ದರೂ ಸ್ಥಳೀಯ ಕನ್ನಡಿಗರಿಗೆ ಸಮರ್ಪಕ ಅವಕಾಶ ದೊರೆಯುತ್ತಿದೆಯೇ ಎಂಬುದನ್ನು ಸರ್ಕಾರ ಗಂಭೀರವಾಗಿ ಪರಿಶೀಲಿಸಬೇಕಿದೆ ಎಂದು ಮಲೆನಾಡು ರಕ್ಷಣಾ ಸೇನೆಯ ಸಕಲೇಶಪುರ ತಾಲೂಕು ಅಧ್ಯಕ್ಷ ಮಂಜುದೇವ್ ಹೇಳಿದರು.

ಕನ್ನಡಿಗರ ಉದ್ಯೋಗದ ಹಕ್ಕಿನ ಕುರಿತು ಮಾತನಾಡಿದ ಅವರು, ರಾಜ್ಯದ ಯುವಜನರು ಉನ್ನತ ಶಿಕ್ಷಣ ಪಡೆದು ಅಗತ್ಯ ಕೌಶಲ್ಯಗಳನ್ನು ಹೊಂದಿದ್ದರೂ ಉದ್ಯೋಗ ಪಡೆಯುವ ಸಂದರ್ಭದಲ್ಲಿ ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ ಎಂಬ ದೂರುಗಳು ಕೇಳಿಬರುತ್ತಿವೆ. ಇಂತಹ ಆರೋಪಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಿ, ನೇಮಕಾತಿ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ತಾರತಮ್ಯ ನಡೆಯದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಪ್ರಮುಖ ಐಟಿ ಮತ್ತು ಖಾಸಗಿ ಕಂಪನಿಗಳಲ್ಲಿ ಸ್ಥಳೀಯ ಕನ್ನಡಿಗರಿಗೆ ದೊರೆಯುತ್ತಿರುವ ಉದ್ಯೋಗಾವಕಾಶಗಳು, ಉನ್ನತ ಹುದ್ದೆಗಳಲ್ಲಿನ ಅವರ ಪ್ರಾತಿನಿಧ್ಯ ಹಾಗೂ ನೇಮಕಾತಿ ಮಾನದಂಡಗಳ ಕುರಿತು ಸಮಗ್ರ ವರದಿ ಸಿದ್ಧಪಡಿಸಬೇಕು. ಉದ್ಯೋಗಾಕಾಂಕ್ಷಿಗಳಿಗೆ ಅನ್ಯಾಯವಾದರೆ ದೂರು ಸಲ್ಲಿಸಲು ಸುಲಭವಾದ ವ್ಯವಸ್ಥೆಯನ್ನೂ ರೂಪಿಸಬೇಕು ಎಂದು ಸಲಹೆ ನೀಡಿದರು.

ಇಂಗ್ಲಿಷ್ ಭಾಷೆಯ ಮೇಲಿನ ಹಿಡಿತವನ್ನೇ ಪ್ರತಿಭೆಯ ಅಳತೆಗೋಲಾಗಿ ಪರಿಗಣಿಸುವುದು ಸರಿಯಲ್ಲ. ಅಭ್ಯರ್ಥಿಯ ವಿಷಯಜ್ಞಾನ, ತಾಂತ್ರಿಕ ಕೌಶಲ್ಯ ಮತ್ತು ಕಾರ್ಯಕ್ಷಮತೆಗೆ ಹೆಚ್ಚಿನ ಮಹತ್ವ ನೀಡಬೇಕು. ಕನ್ನಡದಲ್ಲಿಯೂ ತಾಂತ್ರಿಕ ಹಾಗೂ ಉದ್ಯೋಗ ಕ್ಷೇತ್ರದ



ಪದಗಳ ಬಳಕೆ ಹೆಚ್ಚಾಗಬೇಕು. ಕನ್ನಡವನ್ನು ಬೆಳೆಸುವುದರ ಜೊತೆಗೆ ಇತರ ಭಾಷೆಗಳಿಗೂ ಗೌರವ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಕರ್ನಾಟಕಕ್ಕೆ ಉದ್ಯೋಗಕ್ಕಾಗಿ ಬರುವ ಇತರ ರಾಜ್ಯಗಳ ಜನರ ಬಗ್ಗೆ ಮಲೆನಾಡು ರಕ್ಷಣಾ ಸೇನೆಗೆ ಯಾವುದೇ ವಿರೋಧವಿಲ್ಲ.

ಆದರೆ ಇಲ್ಲಿನ ನೆಲ, ಭಾಷೆ ಮತ್ತು ಸಂಸ್ಕೃತಿಯನ್ನು ಗೌರವಿಸುವುದು ಎಲ್ಲರ ಜವಾಬ್ದಾರಿಯಾಗಿದೆ.

ಅದೇ ರೀತಿ ಸ್ಥಳೀಯ ಯುವಜನರಿಗೂ ತಮ್ಮದೇ ರಾಜ್ಯದಲ್ಲಿ ಉದ್ಯೋಗ ಪಡೆಯಲು ಸಮಾನ ಅವಕಾಶ ದೊರೆಯಬೇಕು ಎಂಬುದು ನಮ್ಮ ಆಶಯವಾಗಿದೆ ಎಂದು ಸ್ಪಷ್ಟಪಡಿಸಿದರು.

ಕನ್ನಡಿಗರ ಉದ್ಯೋಗದ ವಿಚಾರದಲ್ಲಿ ಸರ್ಕಾರ ಕೇವಲ ಭರವಸೆಗಳಿಗೆ ಸೀಮಿತವಾಗದೆ, ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು.

ಸ್ಥಳೀಯ ಯುವಜನರ ಭವಿಷ್ಯ ಮತ್ತು ಪೋಷಕರ ಕನಸುಗಳಿಗೆ ನ್ಯಾಯ ದೊರೆಯಬೇಕು. ಕನ್ನಡಿಗರ ಹಕ್ಕುಗಳಿಗಾಗಿ ಮಲೆನಾಡು ರಕ್ಷಣಾ ಸೇನೆಯ ಹೋರಾಟ ನಿರಂತರವಾಗಿರಲಿದೆ ಎಂದು ಮಂಜುದೇವ್ ತಿಳಿಸಿದರು.

ವಕೀಲರ ರಕ್ಷಣಾ ಕಾಯ್ದೆ ಸಮಗ್ರ ಜಾರಿಗೆ ಆಗ್ರಹ

ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದು ಬೇಲೂರು ವಕೀಲರ ಪ್ರತಿಭಟನೆ

ಪ್ರಜಾ ಭಾರತ ವರದಿ

ಬೇಲೂರು: ವಕೀಲರ ಮೇಲಿನ ಹಲ್ಲೆ, ದೌರ್ಜನ್ಯ ಹಾಗೂ ಕೊಲೆ ಯತ್ನದಂತಹ ಘಟನೆಗಳಿಗೆ ಕಡಿವಾಣ ಹಾಕಲು ವಕೀಲರ ಸಂರಕ್ಷಣಾ ಕಾಯ್ದೆಯನ್ನು ಸಮಗ್ರವಾಗಿ ಮತ್ತು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಬೇಲೂರು ವಕೀಲರು ಮಂಗಳವಾರ ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದು ಪ್ರತಿಭಟನೆ ನಡೆಸಿದರು.

ಬೆಂಗಳೂರಿನ ವೈಟ್‌ಫೀಲ್ಡ್‌ನ ವಕೀಲ ಮಂಜುನಾಥ್, ಅನ್ನಪೂರ್ಣೇಶ್ವರಿ ನಗರದ ವಕೀಲ ಶ್ರೀರಾಮ್ ಅವರ ಹತ್ಯೆ ಹಾಗೂ ಗೌರಿಬಿದನೂರಿನ ವಕೀಲ ವೆಂಕಟರಮಣ ಸನ್ನಕ್ಕಿ ಅವರ ಮೇಲಿನ ಕೊಲೆ ಯತ್ನದ ಘಟನೆಗಳನ್ನು ಖಂಡಿಸಿ ರಾಜ್ಯಾದ್ಯಂತ ಪ್ರತಿಭಟನೆಗೆ ಕರೆ ನೀಡಲಾಗಿತ್ತು. ಅ.29ರಂದು ಬೆಂಗಳೂರು ವಕೀಲರ ಸಂಘದ ವಿಶೇಷ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ನ.3ರಂದು ರಾಜ್ಯದಾದ್ಯಂತ ವಕೀಲರು ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ



ತಾಲೂಕು ವಕೀಲರ ಸಂಘದ ಅಧ್ಯಕ್ಷ ನಟರಾಜ್, ವಕೀಲರ ಮೇಲಿನ ಹಲ್ಲೆ ಮತ್ತು ದೌರ್ಜನ್ಯ ಪ್ರಕರಣಗಳು ಆತಂಕಕಾರಿಯಾಗಿದ್ದು, ವಕೀಲರು ನಿರ್ಭೀತಿಯಿಂದ ವೃತ್ತಿ ನಿರ್ವಹಿಸಲು ಸರ್ಕಾರ ಸೂಕ್ತ ಭದ್ರತೆ ಒದಗಿಸಬೇಕು. ವಕೀಲರ ಸಂರಕ್ಷಣಾ ಕಾಯ್ದೆಯನ್ನು ಸಮಗ್ರವಾಗಿ ಜಾರಿಗೊಳಿಸಿ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ವಕೀಲ ಸೋಮೇಗೌಡ ಮಾತನಾಡಿ, ವಕೀಲರ ಮೇಲೆ ಹಲ್ಲೆ ನಡೆದಾಗ ಸಂಬಂಧಪಟ್ಟ ಕಾಯ್ದೆಯ ಸೆಕ್ಷನ್‌ಗಳನ್ನು ಎಫ್‌ಐಆರ್‌ನಲ್ಲಿ ದಾಖಲಿಸದಿರುವುದು ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಅಡ್ಡಿಯಾಗಿದೆ. ಆರೋಪಿಗಳು ಸುಲಭವಾಗಿ ಜಾಮೀನು ಪಡೆದು ಹೊರಬರುವ ಪರಿಸ್ಥಿತಿ ಬದಲಾಗಬೇಕು. ಇಂತಹ ಪ್ರಕರಣಗಳಲ್ಲಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ವಕೀಲರ ಸಂರಕ್ಷಣಾ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಆಗ್ರಹಿಸಿ ಕಾನೂನು ಸಚಿವರು ಹಾಗೂ ಮುಖ್ಯಮಂತ್ರಿಗಳಿಗೆ ಸಂಘದ ವತಿಯಿಂದ ಮನವಿ ಸಲ್ಲಿಸಲಾಗುವುದು ಎಂದು ಪ್ರತಿಭಟನಾಕಾರರು ತಿಳಿಸಿದರು.

ಪ್ರತಿಭಟನೆಯಲ್ಲಿ ವಕೀಲರಾದ ಸಿ.ಎಂ. ಪೃಥ್ವಿ, ರತೇಶ್, ಚಂದ್ರೇಗೌಡ, ಪುಟ್ಟಸ್ವಾಮಿ ಗೌಡ, ಮಂಜುನಾಥ್, ತಮ್ಮಣ್ಣಗೌಡ ಸೇರಿದಂತೆ ಹಲವು ವಕೀಲರು ಉಪಸ್ಥಿತರಿದ್ದರು.

ಹಾಸನಾಂಬೆ ಸನ್ನಿಧಿಯಲ್ಲಿ ನಟಿ ಪ್ರೇಮ; ಸೆಲ್ಫಿಗಾಗಿ ಅಭಿಮಾನಿಗಳ ಮುಗಿಬೀಳು

ಪ್ರಜಾ ಭಾರತ ವರದಿ

ಹಾಸನ: ಹಾಸನಾಂಬೆ ದೇವಿಯ ದರ್ಶನಕ್ಕೆ ಗಣ್ಯರು ಹಾಗೂ ಸಿನಿಮಾ ತಾರೆಯರ ಆಗಮನ ಮುಂದುವರಿದಿದ್ದು, ಮಂಗಳವಾರ ಕನ್ನಡ ಚಿತ್ರರಂಗದ ಖ್ಯಾತ ನಟಿ ಪ್ರೇಮ ಅವರು ದೇವಾಲಯಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ದೇವಿಯ ಸನ್ನಿಧಿಯಲ್ಲಿ ಭಕ್ತಿಯಿಂದ



ಪ್ರಾರ್ಥಿಸಿದ ನಟಿ ಪ್ರೇಮ, ನಾಡಿನ ಜನತೆಗೆ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ಕರುಣಿಸುವಂತೆ ತಾಯಿಯಲ್ಲಿ ಬೇಡಿಕೊಂಡರು.

ನಟಿ ಪ್ರೇಮ ದೇವಾಲಯಕ್ಕೆ ಆಗಮಿಸಿರುವ ಸುದ್ದಿ ತಿಳಿಯುತ್ತಿದ್ದಂತೆ ಅವರನ್ನು ನೋಡಲು ಅಭಿಮಾನಿಗಳು ಮುಗಿಬಿದ್ದರು. ತಮ್ಮ ನೆಚ್ಚಿನ ನಟಿಯೊಂದಿಗೆ ಫೋಟೋ ಹಾಗೂ ಸೆಲ್ಫಿ ತೆಗೆಸಿಕೊಳ್ಳಲು ಅಭಿಮಾನಿಗಳು ಉತ್ಸಾಹ ತೋರಿದರು. ಇದರಿಂದ ದೇವಾಲಯದ ಆವರಣದಲ್ಲಿ ಕೆಲಕಾಲ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು.

ಹಾಸನಾಂಬೆ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಹೊರರಾಜ್ಯಗಳಿಂದಲೂ ಭಕ್ತರು ಆಗಮಿಸುತ್ತಿದ್ದು, ಸಿನಿಮಾ ತಾರೆಯರು ಮತ್ತು ಗಣ್ಯರ ಭೇಟಿಯೂ ಉತ್ಸವದ ವಿಶೇಷ ಆಕರ್ಷಣೆಯಾಗಿದೆ.

20 ಅಡಿ ಜಾಗಕ್ಕಾಗಿ ಮೂರು ವರ್ಷಗಳಿಂದ ಕಾಯುತ್ತಿರುವ ಹರಗರಹಳ್ಳಿ

ಜೆಜೆಎಂ ಕಾಮಗಾರಿ ಶೇ.60ಕ್ಕೆ ಸ್ಥಗಿತ; 90ಕ್ಕೂ ಹೆಚ್ಚು ಕುಟುಂಬಗಳಿಗೆ ಕುಡಿಯುವ ನೀರಿನ ಸಂಕಷ್ಟ

ಪ್ರಜಾ ಭಾರತ ವರದಿ

ಸಕಲೇಶಪುರ: ತಾಲೂಕಿನ ಬ್ಯಾಕರವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹರಗರಹಳ್ಳಿಯಲ್ಲಿ ಜಲಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಆರಂಭವಾಗಿರುವ ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಕಾಮಗಾರಿ ಕಳೆದ ಮೂರು ವರ್ಷಗಳಿಂದ ಅಪೂರ್ಣವಾಗಿದೆ. ಕೇವಲ 20 ಅಡಿ ಜಾಗದ ಸಮಸ್ಯೆಯಿಂದ ಕಾಮಗಾರಿ ಸ್ಥಗಿತಗೊಂಡಿದ್ದು, 90ಕ್ಕೂ ಹೆಚ್ಚು ಕುಟುಂಬಗಳು ಕುಡಿಯುವ ನೀರಿಗಾಗಿ ಪರದಾಡುತ್ತಿವೆ.

ಗ್ರಾಮದಲ್ಲಿ 300ಕ್ಕೂ ಹೆಚ್ಚು ಜನರು ವಾಸಿಸುತ್ತಿದ್ದು, ಶಾಸಕರ ಅನುದಾನದಲ್ಲಿ ಬಾವಿ ನಿರ್ಮಿಸಿ, ಜೆಜೆಎಂ ಯೋಜನೆಯಡಿ ಪೈಪ್‌ಲೈನ್ ಹಾಗೂ ಟ್ಯಾಂಕ್ ಕಾಮಗಾರಿ ಆರಂಭಿಸಲಾಗಿತ್ತು. ಆದರೆ, ಜಾಗ ಅರಣ್ಯ ಇಲಾಖೆಗೆ ಸೇರಿದೆ ಎಂಬ ಆಕ್ಷೇಪದಿಂದ ಶೇ.60ರಷ್ಟು



ಪೂರ್ಣಗೊಂಡ ಕಾಮಗಾರಿ ಅರ್ಧದಲ್ಲೇ ನಿಂತಿದೆ.

ಕಾಮಗಾರಿ ಸ್ಥಗಿತಗೊಂಡಿರುವುದರಿಂದ ಕಟ್ಟಡದ ಕಬ್ಬಿಣದ ಸರಳುಗಳು ತುಕ್ಕು ಹಿಡಿಯುತ್ತಿದ್ದು, ಕಟ್ಟಡ ಶಿಥಿಲಗೊಳ್ಳುವ ಆತಂಕ ಎದುರಾಗಿದೆ. ಬಾವಿಯಲ್ಲಿ ನೀರಿದ್ದರೂ ಟ್ಯಾಂಕ್ ನಿರ್ಮಾಣ ಪೂರ್ಣಗೊಳ್ಳದ ಕಾರಣ ಗ್ರಾಮಕ್ಕೆ ಸಮರ್ಪಕ ನೀರು ಪೂರೈಕೆಯಾಗುತ್ತಿಲ್ಲ. ವಾರಕ್ಕೊಮ್ಮೆಯೂ ನೀರು ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ.

ಕರ್ನಾಟಕ ರಕ್ಷಣಾ ವೇದಿಕೆ ರೈತ ಘಟಕದ ತಾಲೂಕು ಅಧ್ಯಕ್ಷ ವಸಂತ್ ಬೊಮ್ಮನಕೆರೆ ಮಾತನಾಡಿ, ಈ ಸಮಸ್ಯೆ ಹಲವು ಬಾರಿ ಪ್ರಸ್ತಾಪವಾದರೂ ಪರಿಹಾರ ದೊರೆತಿಲ್ಲ.

ಶಾಸಕರು ಹಾಗೂ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮಸ್ಥರಾದ ಪ್ರವೀಣ್ ಮತ್ತು ಪ್ರಸನ್ನ ಮಾತನಾಡಿ, ಅರಣ್ಯ ಇಲಾಖೆ, ಗ್ರಾಮ ಪಂಚಾಯಿತಿ ಹಾಗೂ ಜೆಜೆಎಂ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಅಗತ್ಯ ಜಾಗ ಒದಗಿಸಬೇಕು ಅಥವಾ ಪರ್ಯಾಯ ಜಾಗ ಗುರುತಿಸಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಆಗ್ರಹಿಸಿದರು.

ನಾಡು–ನುಡಿಯ ಸಂರಕ್ಷಣೆ ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯ

ಪ್ರಜಾ ಭಾರತ ವರದಿ

ಹಾಸನ: ಜನನಿ ಫೌಂಡೇಶನ್ ಹಾಗೂ ಸೀನಿಯರ್ ಚೇಂಬರ್ ಇಂಟರ್‌ನ್ಯಾಷನಲ್ ವತಿಯಿಂದ 71ನೇ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹಲೋ ಹಾಸನ್ ಪತ್ರಿಕೆಯ ರವಿ ನಾಕಲಗೂಡು ಮಾತನಾಡಿ, ನಮ್ಮ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಉಳಿಸಿ, ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಕನ್ನಡಿಗರೆಲ್ಲರೂ ತನು, ಮನ, ಧನದಿಂದ ಶ್ರಮಿಸಬೇಕು. ಕನ್ನಡ ನಾಡು–ನುಡಿಯ ಸೇವೆಗೆ ತಾನು ಸದಾ ಸಿದ್ಧನಿರುವುದಾಗಿ ತಿಳಿಸಿದರು. ಜನನಿ ಫೌಂಡೇಶನ್ ಅಧ್ಯಕ್ಷೆ ಭಾನುಮತಿ ಮಾತನಾಡಿ, ಕನ್ನಡ ರಾಜ್ಯೋತ್ಸವ ಕೇವಲ ನವೆಂಬರ್ 1ಕ್ಕೆ ಸೀಮಿತವಾಗದೆ, ವರ್ಷವಿಡೀ ನಮ್ಮ ಬದುಕಿನ ಭಾಗವಾಗಬೇಕು. ಶ್ರೀಮಂತ



ಇತಿಹಾಸ, ಪರಂಪರೆ ಹಾಗೂ ವಿಶಿಷ್ಟ ಸಂಸ್ಕೃತಿಯನ್ನು ಹೊಂದಿರುವ ಕನ್ನಡ ಭಾಷೆ ನಮ್ಮ ಹೆಮ್ಮೆಯಾಗಿದೆ. ಇಂತಹ ಶ್ರೇಷ್ಠ ಕನ್ನಡ ನಾಡಿನಲ್ಲಿ ಜನಿಸಿರುವುದು ನಮ್ಮ ಸೌಭಾಗ್ಯ ಎಂದರು.

ಕಾರ್ಯಕ್ರಮದಲ್ಲಿ ಶಿವಪ್ಪ ಎಚ್.ಸಿ., ಶಿವಕುಮಾರ್ ಹಾಗೂ ಹರೀಶ್ ಉಪಸ್ಥಿತರಿದ್ದರು. ಜನನಿ ಸಂಸ್ಥೆಯ ಪದಾಧಿಕಾರಿಗಳಾದ ಸಾವಿತ್ರಿ, ಹೇಮಲತಾ, ಚೇತನ, ಸುಂದರಮ್ಮ, ಹರಿಣಿ ಕುಮಾರಿ, ಚೈತ್ರ ಸಿಂಚನ ಸೇರಿದಂತೆ ಸಂಸ್ಥೆಯ ಸದಸ್ಯರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಹಾಸನಾಂಬೆ ಉತ್ಸವದ ನೆಪದಲ್ಲಿ ಜನರ ಕೆಲಸಗಳಿಗೆ ತೊಂದರೆ

ಪ್ರಜಾ ಭಾರತ ವರದಿ

ಚನ್ನರಾಯಪಟ್ಟಣ: ಹಾಸನಾಂಬೆ ಉತ್ಸವದ ನೆಪದಲ್ಲಿ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳು ಸ್ಥಗಿತಗೊಂಡಿದ್ದು, ಜನಸಾಮಾನ್ಯರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಜಿಲ್ಲಾಡಳಿತದ ಈ ಧೋರಣೆ ಹಾಗೂ ವಿಐಪಿ ದರ್ಶನ ವ್ಯವಸ್ಥೆ ವಿರುದ್ಧ ಸಾಮಾಜಿಕ ಹೋರಾಟಗಾರರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಟ್ಟಣದ ತಾಲೂಕು ಪತ್ರಕರ್ತರ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರಾ ಕರ್ತವ್ಯಕ್ಕೆ ಸಾರ್ವಜನಿಕರ ನಿತ್ಯದ ಸಂಪರ್ಕದಲ್ಲಿರುವ ಕಂದಾಯ ಇಲಾಖೆ ಸಿಬ್ಬಂದಿಯನ್ನೇ ಹೆಚ್ಚಿನ ಸಂಖ್ಯೆಯಲ್ಲಿ ನಿಯೋಜಿಸಿರುವುದರಿಂದ ಕಚೇರಿಗಳಲ್ಲಿ ಕೆಲಸಗಳು ವಿಳಂಬವಾಗುತ್ತಿವೆ.



ಈ ಕುರಿತು ಹಲವು ಬಾರಿ ಮನವಿ ಸಲ್ಲಿಸಿದರೂ ಜಿಲ್ಲಾಡಳಿತ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು.

ದೇವರ ದರ್ಶನದಲ್ಲಿ ವಿಐಪಿ, ಜನಪ್ರತಿನಿಧಿಗಳು ಹಾಗೂ ಸಾಮಾನ್ಯ ಭಕ್ತರೆಂಬ ತಾರತಮ್ಯ ಸಲ್ಲದು. ವಿಶೇಷ ಪಾಸ್ ವ್ಯವಸ್ಥೆ ರದ್ದುಗೊಳಿಸಿ ಎಲ್ಲ ಭಕ್ತರಿಗೂ ಸಮಾನ ಸರದಿ ಸಾಲಿನಲ್ಲಿ ದರ್ಶನಕ್ಕೆ ಅವಕಾಶ ಕಲ್ಪಿಸಬೇಕು. ಮುಂದಿನ ಮೂರು ದಿನಗಳಲ್ಲಿ ಈ ವ್ಯವಸ್ಥೆ ಜಾರಿಗೊಳಿಸದಿದ್ದರೆ ಜಿಲ್ಲಾಡಳಿತದ ವಿರುದ್ಧ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಮಹಿಳಾ ರೈತ ಸಂಘದ ಅಧ್ಯಕ್ಷೆ ಎ. ನಾಗರತ್ನ, ಮಂಜು, ರಮೇಶ್, ಮಂಜುನಾಥ್ ಹಾಗೂ ರವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G